# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದಪ್ರಶ್ನೆಸಂಖ್ಯೆ | : | 2108 |
| ಉತ್ತರಿಸಬೇಕಾಗಿದ್ದದಿನಾಂಕ | : | 25.03.2021 |
| ಸದಸ್ಯರಹೆಸರು | : | ಶ್ರೀ ಆರ್.ಬಿ. ತಿಮ್ಮಾಪೂರ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕುಸ್ತಿ ಕ್ರೀಡೆಗೆ ನೀಡುತ್ತಿರುವ ಪ್ರೋತ್ಸಾಹಗಳೇನು; | ಬೆಳಗಾವಿ, ದಾವಣಗೆರೆ, ಗದಗ, ಮೈಸೂರು, ಹಳಿಯಾಳ, ಬಾಗಲಕೋಟೆ, ಧಾರವಾಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಕುಸ್ತಿ ಕ್ರೀಡಾ ವಸತಿ ನಿಲಯಗಳನ್ನು ಸ್ಥಾಪಿಸಿದ್ದು, ಕ್ರೀಡಾಪಟುಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ.<br>ಕುಸ್ತಿ ಜನಪ್ರಿಯವಾಗಿರುವ ಜಿಲ್ಲೆಗಳ ಕ್ರೀಡಾಂಗಣಗಳಲ್ಲಿ ತರಬೇತಿಗಾಗಿ ಆಧುನಿಕ ಕುಸ್ತಿಮ್ಯಾಟ್ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. |
| ಆ) | ಕುಸ್ತಿಪಟುಗಳ ಸಂಖ್ಯೆ ಎಷ್ಟು; ರಾಜ್ಯ ಮತ್ತು ಅಂತರ ರಾಜ್ಯಮಟ್ಟದಲ್ಲಿ ಸ್ಪರ್ಧಿಸಿರುವ ಕುಸ್ತಿಪಟುಗಳ ಸಂಖ್ಯೆ ಎಷ್ಟು; ಇವರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು; | ರಾಜ್ಯ ಮತ್ತು ಅಂತರ ರಾಜ್ಯಮಟ್ಟದಲ್ಲಿ ಸ್ಪರ್ಧಿಸಿರುವ ಕುಸ್ತಿಪಟುಗಳ ಸಂಖ್ಯೆ:1500.<br>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯಗಳಲ್ಲಿ 2019-20ನೇ ಸಾಲಿನಲ್ಲಿ 206 ಕುಸ್ತಿಪಟುಗಳಿಗೆ ಪ್ರವೇಶ ನೀಡಲಾಗಿದೆ. ಈ ಪೈಕಿ 118 ಕುಸ್ತಿಪಟುಗಳು ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸಿರುತ್ತಾರೆ. |
| ಇ) | ಕುಸ್ತಿಪಟುಗಳಿಗೆ ಪ್ರೋತ್ಸಾಹ ನೀಡಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು? | ಗ್ರಾಮೀಣ ದೇಸೀ ಕ್ರೀಡೆಯಾದ ಕುಸ್ತಿಯನ್ನು ಉಳಿಸಿ ಬೆಳೆಸಲು ಹಾಗೂ ಎಳೆಯ ಹಂತದಲ್ಲಿಯೇ ಪ್ರತಿಭೆಗಳನ್ನು ಗುರುತಿಸಲು ಕುಸ್ತಿ ಹಬ್ಬವನ್ನು ಹಮ್ಮಿಕೊಳ್ಳಲಾಗುತ್ತಿದೆ.<br>ಸದರಿ ಕ್ರೀಡಾಪಟುಗಳಿಗೆ ನುರಿತ ತರಬೇತುದಾರರಿಂದ ಕ್ರೀಡಾ ತರಬೇತಿ; ವಸತಿ ಸೌಲಭ್ಯ; ಊಟೋಪಹಾರ; ಪದಕ ವಿಜೇತ ಕ್ರೀಡಾಪಟುಗಳಿಗೆ ನಗದು ಪ್ರೋತ್ಸಾಹ ಧನ; ಕ್ರೀಡಾ ಸಮವಸ್ತ್ರ, ಮತ್ತು ಪಂದ್ಯಾವಳಿಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ/ ದಿನಭತ್ಯೆ; ರಾಷ್ಟ್ರ ಹಾಗೂ ಅಂತರ ರಾಜ್ಯಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಕುಸ್ತಿ ಕ್ರೀಡಾಪಟುಗಳಿಗೆ ನಗದು ಬಹುಮಾನ; ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಮತ್ತು ರಾಷ್ಟ್ರಮಟ್ಟದಲ್ಲಿ ಭಾಗವಹಿಸಿ ಪದಕ ಪಡೆದ ಕ್ರೀಡಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದವರಿಗೆ ಶೈಕ್ಷಣಿಕ ಶುಲ್ಕ ಮರು ಪಾವತಿಯನ್ನು ಮಾಡಲಾಗುತ್ತದೆ. |

ವೈಎಸ್‌ಡಿ - ಇಬಿಬಿ / 88 / 2021

(ಡಾ|| ನಾರಾಯಣಗೌಡ)
ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು.